Akashvani: Bangalore
Regional Bulletin In Kannada
05.11.2026: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

05.11.2026: 14.30hrs
****

ಮುಖ್ಯಾಂಶಗಳು :

- ಬರಗಾಲದಿಂದ ಉಂಟಾದ ಬೆಳೆ ಹಾನಿಯ ಮೊದಲ ಕಂತಿನ ಹಣ ಬಿಡುಗಡೆಗೊಳಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಬಸ್ ದರ ಏರಿಕೆ ಖಂಡಿಸಿ ಬೆಂಗಳೂರಿನ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಬಿಜೆಪಿ ಪ್ರತಿಭಟನೆ; ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅಸಮಾಧಾನ
- ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹಿಸಿ ಇಂಡಿ ಒಕ್ಕೂಟದಿಂದ ಬೆಂಗಳೂರಿನಲ್ಲಿ ಪ್ರತಿಭಟನೆ
- ಬೆಳಗಾವಿಯಲ್ಲಿ ಮುಂದುವರಿದ ಜೈಲ್ ಭರೋ ಚಳವಳಿ; ರೈತ ಮುಖಂಡರು ಪೊಲೀಸರ ವಶಕ್ಕೆ
- ವಿಕಸಿತ ಭಾರತ - ಜಿರಾಮ್ ಜಿ ಯೋಜನೆಯಲ್ಲಿ ಪಶು ಸಂಗೋಪನೆ, ಮೂಲಸೌಕರ್ಯ ಬಲಪಡಿಸಲು ರಾಜ್ಯಕ್ಕೆ ಕೇಂದ್ರ ಸರ್ಕಾರ ಸಲಹೆ

****

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ವಿಧಾನಸೌಧದಲ್ಲಿಂದು ಯಾದಗಿರಿ ಜಿಲ್ಲೆಯ ರೈತರ ಖಾತೆಗೆ ಹಣ ಜಮೆ ಮಾಡುವ ಮೂಲಕ ಬರ ಪರಿಹಾರ ವಿತರಣೆಗೆ ಚಾಲನೆ ನೀಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨ ಸಾವಿರದ ೫೦೦ ರೂಪಾಯಿ ಇದ್ದ ಬರ ಪರಿಹಾರದ ಮೊತ್ತವನ್ನು ೫ ಸಾವಿರ ರೂಪಾಯಿಗೆ ಹೆಚ್ಚಿಸಿರುವುದಾಗಿ ಘೋಷಣೆ ಮಾಡಿದ್ದಾರೆ. ಈಗ ರೈತರ ಖಾತೆಗೆ ೨ ಸಾವಿರದ ೫೦೦ ರೂಪಾಯಿ ಬರ ಪರಿಹಾರ ನೀಡಲಾಗುತ್ತಿದ್ದು, ನೇರವಾಗಿ ರೈತರ ಖಾತೆಗೆ ಸೇರಲಿದೆ.

ದೀಪಾವಳಿ ಮುಗಿದ ಬಳಿಕ ಇನ್ನು ೨ ಸಾವಿರದ ೫೦೦ ರೂಪಾಯಿ ಹಾಕಲಾಗುವುದು ಎಂದು ತಿಳಿಸಿದ್ದಾರೆ.

****

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ಪ್ರಗತಿಯಲ್ಲಿದೆ. ಇಂದಿನ ಸಭೆಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮೀಸಲಾತಿ ಪಟ್ಟಿ ಹಾಗೂ ವಿವಿಧ ಆಡಳಿತಾತ್ಮಕ ಯೋಜನೆಗಳಿಗೆ ಸಂಬಂಧಿಸಿದ ಮಹತ್ವದ ನಿರ್ಣಯಗಳನ್ನು ಕೈಗೊಳ್ಳುವ ಸಾಧ್ಯತೆ ಇದೆ. ಇದೇ ವೇಳೆ ರಾಜ್ಯದ ಹಲವೆಡೆ ಕಬ್ಬು ಬೆಳೆಗಾರರು ಪ್ರತಿ ಟನ್ ಕಬ್ಬಿಗೆ ಒಂದು ಸಾವಿರ ರೂಪಾಯಿ ಸಬ್ಸಿಡಿ ನೀಡಬೇಕು ಎಂಬ ಆಗ್ರಹ ಕುರಿತಂತೆಯೂ ಸಭೆಯಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ.

****

ಬಸ್ ದರಗಳನ್ನು ಹೆಚ್ಚಿಸಿರುವ ರಾಜ್ಯ ಸರ್ಕಾರದ ನಿರ್ಧಾರ ಖಂಡಿಸಿ, ಬಿಜೆಪಿ ನಾಯಕರು ಇಂದು ಬೆಂಗಳೂರಿನ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಸರ್ಕಾರ ಸಾಮಾನ್ಯ ಪ್ರಯಾಣಿಕರ ಮೇಲೆ ಆರ್ಥಿಕ ಹೊರೆ ಹೊರಿಸಿದೆ ಎಂದು ಆರೋಪಿಸಿದ್ದಾರೆ. ಪ್ರತಿಭಟನೆ ವೇಳೆ ಬಿಜೆಪಿ ನಾಯಕರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಾರಿಗೆ ಸಚಿವ ಬೈರತಿ ಸುರೇಶ್ ಅವರ ಮುಖವಾಡಗಳನ್ನು ಧರಿಸಿ, ಗಮನ ಸೆಳೆದರು. ಇದೇ ವೇಳೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ, ಬಸ್ ದರ ಏರಿಕೆ ರಾಜ್ಯ ಸರ್ಕಾರದ ೬ನೇ ಗ್ಯಾರಂಟಿ ಎಂದು ವ್ಯಂಗ್ಯವಾಡಿದ್ದಾರೆ. ಸರ್ಕಾರದ ಈ ನಿರ್ಧಾರವು ಸಾರ್ವಜನಿಕ ಸಾರಿಗೆಯನ್ನೇ ಅವಲಂಬಿಸಿರುವ ಬಡವರ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ತಿಳಿಸಿದ್ದಾರೆ.

****

ಬಸ್ ದರ ಏರಿಕೆಯನ್ನು ಕೇಂದ್ರ ಉಕ್ಕು ಮತ್ತು ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಖಂಡಿಸಿದ್ದಾರೆ. ಸಾರಿಗೆ ನಿಗಮಗಳಿಗೆ ನೀಡಬೇಕಾದ ಸುಮಾರು ೯ ಸಾವಿರ ಕೋಟಿ ರೂಪಾಯಿಗಳ ಬಾಕಿ ಹಣವನ್ನು ಪಾವತಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ 'ಶಕ್ತಿ' ಯೋಜನೆಯ ಆರ್ಥಿಕ ನಿರ್ವಹಣೆಯನ್ನು ಅವರು ಪ್ರಶ್ನಿಸಿದ್ದಾರೆ. ತಮ್ಮದೇ ನೀತಿಗಳ ಮೂಲಕ ಪ್ರಯಾಣಿಕರ ಮೇಲೆ ಆರ್ಥಿಕ ಹೊರೆಯನ್ನು ಹೆಚ್ಚಿಸುತ್ತಿರುವ ಸರ್ಕಾರವು, ಡೀಸೆಲ್ ಬೆಲೆಗಳ ವಿಚಾರದಲ್ಲಿ ಕೇಂದ್ರ ಸರ್ಕಾರದತ್ತ ಬೆರಳು ತೋರಿಸುತ್ತಿರುವುದನ್ನು ಕುಮಾರಸ್ವಾಮಿ ಟೀಕಿಸಿದ್ದಾರೆ.

****

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಇಂಡಿ ಒಕ್ಕೂಟ, ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿದೆ. ಮತ ಉಳಿಸಿ, ದೇಶ ಉಳಿಸಿ, ಧ್ಯೇಯ ವಾಕ್ಯದಡಿ ಪ್ರತಿಭಟನೆ ನಡೆಯುತ್ತಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಎಂ.ಬಿ. ಪಾಟೀಲ್, ಯತೀಂದ್ರ ಸಿದ್ದರಾಮಯ್ಯ, ಬಹುಭಾಷಾ ನಟ ಪ್ರಕಾಶ್ ರಾಜ್ ಸೇರಿದಂತೆ ಪ್ರತಿಭಟನೆಯಲ್ಲಿ ಹಲವರು ಭಾಗಿಯಾಗಿದ್ದಾರೆ. ಇಂದಿನ ಪ್ರತಿಭಟನೆಯಲ್ಲಿ ಪ್ರಮುಖ ಐದು ನಿರ್ಣಯಗಳನ್ನು ಮಂಡಿಸಲಾಗಿದೆ. ಎಸ್‌ಐಆರ್ ರದ್ದು ಮಾಡಬೇಕು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು, ಮುಖ್ಯ ಚುನಾವಣಾ ಆಯುಕ್ತರ ನೇಮಕಾತಿ ಕಾನೂನನ್ನು ರದ್ದು ಮಾಡಬೇಕು. ಸುಪ್ರೀಂಕೋರ್ಟ್ ಸೂಚನೆಯಂತೆ ನೇಮಕಾತಿಯ ಸ್ವಾಯತ್ತತೆಯನ್ನು ಖಾತ್ರಿಪಡಿಸಬೇಕು. ರಾಜ್ಯ ಸರ್ಕಾರ ಎಸ್‌ಐಆರ್ ಅಂತಿಮ ಪಟ್ಟಿ ತಿರಸ್ಕರಿಸಬೇಕು. ರಾಜ್ಯದಲ್ಲಿ ನಡೆಯುವ ಸ್ಥಳೀಯ ಸಂಸ್ಥೆ ಚುನಾವಣೆಗಳನ್ನು, ಎಸ್‌ಐಆರ್ ಪೂರ್ವ ಪಟ್ಟಿ ಆಧರಿಸಿ ನಡೆಸಲು ಕ್ರಮ ವಹಿಸಬೇಕು ಎಂದು ನಿರ್ಣಯ ಕೈಗೊಳ್ಳಲಾಗಿದೆ. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇದು ಬರಿ ರಾಜ್ಯದ ಹೋರಾಟ ಅಲ್ಲ, ಇಡೀ ದೇಶದ ಹೋರಾಟ ಎಂದು ತಿಳಿಸಿದ್ದಾರೆ.

****

ರಾಜ್ಯ ಸರ್ಕಾರದಿಂದ ಪ್ರತಿ ಟನ್ ಕಬ್ಬಿಗೆ ಒಂದು ಸಾವಿರ ರೂಪಾಯಿ ಸಬ್ಸಿಡಿ ನೀಡಬೇಕು ಎಂದು ಆಗ್ರಹಿಸಿ, ಕಬ್ಬು ಬೆಳೆಗಾರರು ಬೆಳಗಾವಿಯಲ್ಲಿ ಜೈಲ್ ಭರೋ ಚಳವಳಿ ಮುಂದುವರಿಸಿದ್ದಾರೆ. ಬೆಳಗಾವಿ ಹೊರ ವಲಯದಲ್ಲಿ ಪ್ರತಿಭಟನಾ ರ್ಯಾಲಿಯನ್ನು ತಡೆದ ಪೊಲೀಸರು, ಪ್ರಮುಖ ರೈತ ಮುಖಂಡರಾದ ಚೂನಪ್ಪ ಪೂಜಾರಿ ಹಾಗೂ ಶಶಿಕಾಂತ್ ಗುರೂಜಿ ಅವರನ್ನು ವಶಕ್ಕೆ ಪಡೆದಿದ್ದಾರೆ.

ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್‌ಗೆ ೪ ಸಾವಿರದ ೫೦೦ ರೂಪಾಯಿ ಪಾವತಿಸಬೇಕು ಮತ್ತು ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ಒಂದು ಸಾವಿರ ರೂಪಾಯಿ ನೀಡಬೇಕು ಎಂದು ರೈತರು ಒತ್ತಾಯಿಸಿದ್ದಾರೆ. ಸಕ್ಕರೆಯ ಕನಿಷ್ಠ ಮಾರಾಟ ಬೆಲೆಯನ್ನು ಪ್ರತಿ ಕೆಜಿಗೆ ಪ್ರಸ್ತುತ ಇರುವ ೩೧ ರೂಪಾಯಿಯಿಂದ ೪೦ ರೂಪಾಯಿಗೆ ಹೆಚ್ಚಿಸುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ. ಇಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ ಒಂದು ಸಾವಿರ ರೂಪಾಯಿ ಸಬ್ಸಿಡಿ ಘೋಷಿಸುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

****

ಗ್ರಾಮೀಣ ಭಾಗದಲ್ಲಿ ಮೇವಿನ ಭದ್ರತೆ, ಹುಲ್ಲುಗಾವಲು ಅಭಿವೃದ್ಧಿ ಹಾಗೂ ಪಶುಸಂಗೋಪನೆ ಮೂಲಸೌಕರ್ಯಗಳನ್ನು ಬಲಪಡಿಸಲು ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ - ೨೦೨೫ರಡಿಯಲ್ಲಿ ವಿವಿಧ ಯೋಜನೆಗಳನ್ನು ಸಂಯೋಜಿಸಿ ಜಾರಿಗೊಳಿಸುವಂತೆ ಕೇಂದ್ರ ಸರ್ಕಾರ ರಾಜ್ಯಗಳಿಗೆ ಸಲಹೆ ನೀಡಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಶು ಸಂಗೋಪನೆ ಇಲಾಖೆಗಳು ಜಂಟಿಯಾಗಿ ಈ ಮಾರ್ಗಸೂಚಿ ಹೊರಡಿಸಿದ್ದು, ಪಶುಸಂಗೋಪನೆಯನ್ನೇ ನೆಚ್ಚಿಕೊಂಡಿರುವ ಸಣ್ಣ, ಅತಿ ಸಣ್ಣ ಮತ್ತು ಭೂರಹಿತ ರೈತರ ಜೀವನೋಪಾಯವನ್ನು ಸುಧಾರಿಸುವುದು ಇದರ ಉದ್ದೇಶವಾಗಿದೆ. ಈ ಯೋಜನೆಯಡಿ ಅನುಮತಿಸಲಾದ ೩೭೫ ಕಾಮಗಾರಿಗಳಲ್ಲಿ ಮೇವು ಬೆಳೆ, ಸಂಗ್ರಹಣೆ, ಪಶು ಕೊಟ್ಟಿಗೆ, ಡೈರಿ ಹಾಗೂ ಪಶು ವೈದ್ಯಕೀಯ ಸೌಲಭ್ಯಗಳಿಗೆ ಸಂಬಂಧಿಸಿದ ೨೨ ಪ್ರಮುಖ ಕೆಲಸಗಳನ್ನು ಗುರುತಿಸಲಾಗಿದೆ.

****

ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳ್ಳಲು ಬಾಕಿ ಉಳಿದಿರುವವರು ಮತ್ತು ಮೊದಲ ಬಾರಿಗೆ ಅರ್ಹತೆ ಪಡೆದ ಮತದಾರರನ್ನು ನೋಂದಾಯಿಸುವ ಉದ್ದೇಶದಿಂದ ಕೇಂದ್ರ ಚುನಾವಣಾ ಆಯೋಗ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ - ಎಸ್‌ಎಸ್‌ಆರ್ ಪ್ರಕ್ರಿಯೆಗಾಗಿ ವೇಳಾಪಟ್ಟಿ ಪ್ರಕಟಿಸಿದೆ. ಮತದಾರರ ಪಟ್ಟಿಯ ಅಂತಿಮ ಪ್ರಕಟಣೆಯು ೨೦೨೬ರ ಜನವರಿ ೨೧ರಂದು ನಡೆಯಲಿದೆ.

ಈ ಪ್ರಕ್ರಿಯೆಯು ಹಂತ ಹಂತವಾಗಿ ನಡೆಯಲಿದ್ದು, ದೇಶಾದ್ಯಂತ ಒಂದೇ ಬಾರಿಗೆ ನಡೆಯುವುದಿಲ್ಲ ಎಂದು ಆಯೋಗ ತಿಳಿಸಿದೆ. ಕರ್ನಾಟಕದಲ್ಲಿ ಎಸ್‌ಎಸ್‌ಆರ್ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು ಎಂದು ಚುನಾವಣಾ ಆಯೋಗ ಹೇಳಿಕೆಯಲ್ಲಿ ಸ್ಪಷ್ಟಪಡಿಸಿದೆ.

****

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇಂದು ಕನಕಪುರ ರಸ್ತೆಯಲ್ಲಿರುವ ಐಕಿಯಾ ಮಳಿಗೆಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಐಕಿಯಾ ಇಂಡಿಯಾದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪ್ಯಾಟ್ರಿಕ್ ಆಂಟೋನಿ, ಸ್ವೀಡನ್‌ನ ಕಾನ್ಸುಲೇಟ್ ಜನರಲ್ ಅರುಣ್ ವಾಸು, ಜಾಗತಿಕ ಹೂಡಿಕೆ ಮತ್ತು ಸಾಗರೋತ್ತರ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ಎಸ್.ಎಸ್. ನಕುಲ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

****

ಕೃಷ್ಣಾ ಅಚ್ಚುಕಟ್ಟು ಪ್ರದೇಶದಲ್ಲಿ ತೀವ್ರ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಜಲಾಶಯಗಳಲ್ಲಿ ಲಭ್ಯವಿರುವ ನೀರಿನಲ್ಲಿ ಕುಡಿಯುವ ನೀರಿನ ಅಗತ್ಯವನ್ನು ಕಾಯ್ದಿರಿಸಿ, ಉಳಿದ ನೀರನ್ನು ಇದೇ ೩೦ರವರೆಗೆ ಕಾಲುವೆಗಳಿಗೆ ಹರಿಸಿ ಬೆಳೆಗಳನ್ನು ರಕ್ಷಿಸಲು ಕ್ರಮ ಕೈಗೊಳ್ಳುವಂತೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು, ಮನವಿ ಮಾಡಿದ್ದಾರೆ. ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಪ್ರಸ್ತುತ ಸುಮಾರು ೫೩ ಟಿಎಂಸಿ ನೀರು ಲಭ್ಯವಿದ್ದು, ಅಕ್ಟೋಬರ್ ೧೫ರಂದು ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಇದೇ ೧೨ರವರೆಗೆ ವಾರಾಬಂದಿ ಪದ್ಧತಿಯಲ್ಲಿ ಕಾಲುವೆಗಳಿಗೆ ನೀರು ಹರಿಸಲು ತೀರ್ಮಾನಿಸಲಾಗಿತ್ತು ಎಂದು ಸಚಿವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈಗಿನ ಪರಿಸ್ಥಿತಿಯಲ್ಲಿ ಲಭ್ಯವಿರುವ ನೀರನ್ನು ಅತ್ಯಂತ ವೈಜ್ಞಾನಿಕವಾಗಿ ಮತ್ತು ಸಮರ್ಪಕವಾಗಿ ನಿರ್ವಹಿಸಿ, ಕುಡಿಯುವ ನೀರಿನ ಅಗತ್ಯವನ್ನು ಸುರಕ್ಷಿತವಾಗಿರಿಸಿಕೊಂಡು ಬೆಳೆ ರಕ್ಷಣೆಗೆ ಸಾಧ್ಯವಾದಷ್ಟು ನೀರು ಒದಗಿಸಬೇಕು," ಎಂದು ಮನವಿ ಮಾಡಿದ್ದಾರೆ.

****

"ಸಾಂಪ್ರದಾಯಿಕ ಹರಳು ರೂಪದ ರಸಗೊಬ್ಬರಗಳಿಂದ ಮಣ್ಣಿನ ಫಲವತ್ತತೆ ಕುಸಿಯುವುದಲ್ಲದೆ ಅಂತರ್ಜಲವೂ ಕಲುಷಿತಗೊಳ್ಳುತ್ತಿದೆ ಎಂದು ದಾವಣಗೆರೆ ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ತಿಳಿಸಿದ್ದಾರೆ. ಆನಗೋಡು ಹೋಬಳಿಯ ಹಾಲವರ್ತಿ ಗ್ರಾಮದಲ್ಲಿ ತೊಗರಿ ಜಮೀನಿನಲ್ಲಿ ಕೃಷಿ ಇಲಾಖೆ ಸಹಯೋಗದೊಂದಿಗೆ ಆಯೋಜಿಸಿದ್ದ 'ಡ್ರೋನ್ ಮೂಲಕ ನ್ಯಾನೊ ರಸಗೊಬ್ಬರ ಸಿಂಪರಣಾ ಪ್ರಾತ್ಯಕ್ಷಿಕೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇದಕ್ಕೆ ಪರ್ಯಾಯವಾಗಿ ದ್ರವರೂಪದ ನ್ಯಾನೋ ರಸಗೊಬ್ಬರ ಬಳಸುವುದು ಮಣ್ಣು ಹಾಗೂ ಪೋಷಕಾಂಶಗಳ ನಿರ್ವಹಣೆ ದೃಷ್ಟಿಯಿಂದ ಅತ್ಯಂತ ಪರಿಣಾಮಕಾರಿ ಎಂದು ಹೇಳಿದ್ದಾರೆ. ಸಾಂಪ್ರದಾಯಿಕ ಡಿಎಪಿ ಹಾಗೂ ಯೂರಿಯಾ ಗೊಬ್ಬರಗಳನ್ನು ನೇರವಾಗಿ ಮಣ್ಣಿಗೆ ನೀಡುವುದರಿಂದ ರಾಸಾಯನಿಕಗಳು ನೀರಿನಲ್ಲಿ ಕರಗಿ ಅಂತರ್ಜಲವನ್ನು ಸೇರುವ ಮೂಲಕ ಮನುಷ್ಯರು ಹಾಗೂ ಜಾನುವಾರುಗಳ ಆರೋಗ್ಯಕ್ಕೆ ಮಾರಕ ಎಂದು ತಿಳಿಸಿದ್ದಾರೆ.

****

ಸಂಕ್ಷಿಪ್ತ ಸುದ್ದಿ :

೧. ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಇಂದು ಗದಗ ಜಿಲ್ಲೆಯ ರೋಣ ಪಟ್ಟಣದಲ್ಲಿ ವಿ.ಎಂ.ನಾಡಗೌಡ್ರ ಕಾನೂನು ಮಹಾವಿದ್ಯಾಲಯವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ವಿಧಾನಸಭೆಯ ಸಭಾಧ್ಯಕ್ಷರಾದ ಜಿ.ಎಸ್. ಪಾಟೀಲ್, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

೨. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ 'ಪ್ರಜಾಸೇವಾ' ಕಾರ್ಯಕ್ರಮವು ಕೇವಲ ಕಾಗದಪತ್ರಗಳ ವಿಲೇವಾರಿಗೆ ಸೀಮಿತವಾಗದೆ, ಸಾರ್ವಜನಿಕರ ದೀರ್ಘಕಾಲದ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ವೇದಿಕೆಯಾಗಬೇಕು ಎಂದು ಕೋಲಾರದ ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕ ಕೆ.ವೈ. ನಂಜೇಗೌಡ ತಿಳಿಸಿದ್ದಾರೆ.

೩. ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಜೆ.ಪಿ. ನಗರ ೪ನೇ ಹಂತದ ಮೆಟ್ರೋ ನಿಲ್ದಾಣದ ಸುತ್ತಮುತ್ತಲಿನ ರಸ್ತೆಗಳು, ಪಾದಚಾರಿ ಮಾರ್ಗ ಹಾಗೂ ವೈಷ್ಣವಿ ಅಪಾರ್ಟ್‌ಮೆಂಟ್

ಮುಂಭಾಗದಲ್ಲಿ ಹಾದುಹೋಗುವ ಮಳೆನೀರು ಕಾಲುವೆ ಪ್ರದೇಶಗಳಿಗೆ ಪಾಲಿಕೆ ಆಯುಕ್ತ ಕೆ. ಎನ್. ರಮೇಶ್, ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

******END*****